**ಸಹಕಾರ ಚುನಾವಣಾ ಪ್ರಾಧಿಕಾರ**

**3ನೇಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್, ಶ್ರೀ ಕೆಂಗಲ್ ಹನುಮಂತಯ್ಯ ರಸ್ತೆ, ಶಾಂತಿನಗರ, ಬೆಂಗಳೂರು-560027.**

e.mail: coea-coop@karnataka.gov.in Website: coea.karnataka.gov.in

Phone: 080-22220066/29709014


**ವಿಷಯ:** ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಕಲಂ 26 ಎ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು, 2004ರ ನಿಯಮ 2(ಜಿ-2) ರಂತೆ ದಿನಾಂಕ: **01.01.2026** ರಿಂದ **31.12.2026** ರವರೆಗೆ ಎಲ್ಲಾ ರೀತಿಯ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿ/ ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

**ಉಲ್ಲೇಖ:** ಸಹಕಾರ ಚುನಾವಣಾ ಪ್ರಾಧಿಕಾರದ ಆದೇಶ ಸಂಖ್ಯೆ: ಸಚುಪ್ರಾ/ಆಡಳಿತ/ಸೌಸಚುನೇ/ 07/2024-25, ದಿನಾಂಕ:11-06-2024.

**ಪ್ರಸ್ತಾವನೆ:**

ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು, 2004 (2015ರ ತಿದ್ದುಪಡಿ)ರ ನಿಯಮ 2(ಜಿ-2)ರಲ್ಲಿ ಪ್ರದತ್ತವಾದ ಅಧಿಕಾರದಂತೆ, 2026ನೇ ಸಾಲಿನಲ್ಲಿ ಅಂದರೆ **ದಿನಾಂಕ: 01.01.2026 ರಿಂದ 31.12.2026** ರವರೆಗೆ ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗಲಿರುವ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಯ ನಿರ್ದೇಶಕರ ಸಾಮಾನ್ಯ ಚುನಾವಣೆ/ಹೊಸದಾಗಿ ನೋಂದಣಿಯಾದ ಸೌಹಾರ್ದ ಸಹಕಾರಿಗಳ/ಪುನಶ್ಚೇತನಗೊಂಡ ಸೌಹಾರ್ದ ಸಹಕಾರಿಗಳ/ವಿಶೇಷಾಧಿಕಾರಿ ನೇಮಕಗೊಂಡ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ ಮತ್ತು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ಹಾಗೂ ಆಕಸ್ಮಿಕವಾಗಿ ಖಾಲಿ ಬಿದ್ದ ನಿರ್ದೇಶಕ ಸ್ಥಾನ/ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಿಸಬೇಕಾಗಿರುತ್ತದೆ.

ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004, (2015ರ ತಿದ್ದುಪಡಿ)ರ ನಿಯಮ 2(ಜಿ-2) ರಂತೆ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿಯ ನಿರ್ದೇಶಕರ ಸಾಮಾನ್ಯ ಚುನಾವಣೆ/ಹೊಸದಾಗಿ ನೋಂದಣಿಯಾದ ಸೌಹಾರ್ದ ಸಹಕಾರಿಗಳ/ಪುನಶ್ಚೇತನಗೊಂಡ ಸೌಹಾರ್ದ ಸಹಕಾರಿಗಳ/ವಿಶೇಷಾಧಿಕಾರಿ ನೇಮಕಗೊಂಡ ಆಡಳಿತ ಮಂಡಲಿ ಚುನಾವಣೆ ಮತ್ತು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ಹಾಗೂ ಆಕಸ್ಮಿಕವಾಗಿ ಖಾಲಿ ಬಿದ್ದ ನಿರ್ದೇಶಕ ಸ್ಥಾನ/ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## :ಆ ದೇ ಶ:

**ಸಂಖ್ಯೆ: ಸಚುಪ್ರಾ/ಆಡಳಿತ/ಸೌಸಚುನೇ/06/2025-26** **ದಿನಾಂಕ:04-07-2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು, 2004 (2015ರ ತಿದ್ದುಪಡಿ) ರ ನಿಯಮ 2(ಜಿ-2) ರಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಡಾ: ಎನ್.ನಾಗಾಂಬಿಕಾ ದೇವಿ, ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಆದ ನಾನು ನಿಯಮ 5-ಎ ರಂತೆ ಆಯಾ ಜಿಲ್ಲೆಯಲ್ಲಿ ನೋಂದಣಿಯಾಗಿರುವ ಹಾಗೂ 2026ನೇ ಸಾಲಿನಲ್ಲಿ ಆಡಳಿತ ಮಂಡಲಿ ಪದಾವಧಿಯು ಮುಕ್ತಾಯವಾಗಲಿರುವ ಎಲ್ಲಾ ಸೌಹಾರ್ದ ಸಹಕಾರಿಗಳ ಆಡಳಿತ

ಮಂಡಲಿಯ ನಿರ್ದೇಶಕರ ಸಾಮಾನ್ಯ ಚುನಾವಣೆ/ಹೊಸದಾಗಿ ನೋಂದಣಿಯಾದ ಸೌಹಾರ್ದ ಸಹಕಾರಿಗಳ/ ಪುನಃಶ್ಚೇತನಗೊಂಡ ಸೌಹಾರ್ದ ಸಹಕಾರಿಗಳ/ವಿಶೇಷಾಧಿಕಾರಿ ನೇಮಕಗೊಂಡ ಸೌಹಾರ್ದ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ ಮತ್ತು ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ಹಾಗೂ ಆಕಸ್ಮಿಕವಾಗಿ ಖಾಲಿ ಬಿದ್ದ ನಿರ್ದೇಶಕ ಸ್ಥಾನ/ಪದಾಧಿಕಾರಿಗಳ ಚುನಾವಣೆ ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನು ಕೋಷ್ಟಕದಲ್ಲಿ ತಿಳಿಸಿರುವಂತೆ [illegible] ಚುನಾವಣಾಧಿಕಾರಿಗಳನ್ನಾಗಿ **ದಿನಾಂಕ: 01.01.2026 ರಿಂದ 31.12.2026** ರವರೆಗೆ ನೇಮಕಾತಿ ಮಾಡಿ ಆದೇಶಿಸಿರುತ್ತೇನೆ.

| ಕ್ರ. ಸಂ. | ಚುನಾವಣಾಧಿಕಾರಿಯಾಗಿ ನೇಮಕಗೊಳಿಸಲ್ಪಟ್ಟ ಅಧಿಕಾರಿ | ಚುನಾವಣಾಧಿಕಾರಿಯ ವ್ಯಾಪ್ತಿಗೆ ಬರುವ ಎಲ್ಲಾ ವಿಧದ ಸೌಹಾರ್ದ ಸಹಕಾರಿಗಳು |
|---|---|---|
| 1 | ಎಲ್ಲಾ ಜಿಲ್ಲೆಯ ಸಹಕಾರ ಸಂಘಗಳ ಉಪ ನಿಬಂಧಕರು | ಆಯಾ ಜಿಲ್ಲೆಯ ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಸೌಹಾರ್ದ ಸಹಕಾರಿಗಳು |
| 2 | ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು | ತಾಲ್ಲೂಕು ಮಟ್ಟ ಮತ್ತು ತಾಲ್ಲೂಕು ಮಟ್ಟಕ್ಕೆ ಮೇಲ್ಪಟ್ಟು ಹಾಗೂ ಜಿಲ್ಲಾ ಮಟ್ಟದವರೆಗೆ ಕಾರ್ಯವ್ಯಾಪ್ತಿ ಹೊಂದಿರುವ ಸೌಹಾರ್ದ ಸಹಕಾರಿಗಳು |
| 3 | ಸಹಕಾರ ಸಂಘಗಳ ಅಪರ ನಿಬಂಧಕರು ಹಾಗೂ ಕಾರ್ಯದರ್ಶಿ, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು | ಜಿಲ್ಲಾ ಮಟ್ಟಕ್ಕಿಂತ ಮೇಲ್ಪಟ್ಟು, ಪ್ರಾಂತೀಯ ಮಟ್ಟ, ಪ್ರಾಂತೀಯ ಮಟ್ಟಕ್ಕೂ ಮೇಲ್ಪಟ್ಟು ಹಾಗೂ ರಾಜ್ಯಮಟ್ಟದ ಕಾರ್ಯವ್ಯಾಪ್ತಿ ಹೊಂದಿರುವ ಸೌಹಾರ್ದ ಸಹಕಾರಿಗಳು. |

ಚುನಾವಣಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಗೆ ಬರುವಂತಹ ಸೌಹಾರ್ದ ಸಹಕಾರಿಗಳ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ಹಾಗೂ ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ಸುತ್ತೋಲೆ, ಅಧಿಸೂಚನೆ, ಆದೇಶ ಮತ್ತು ಮಾರ್ಗಸೂಚಿಗಳನ್ನು, (ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮಗಳು ಮತ್ತು ನಿಯಮಾನುಸಾರ) ಅನುಸರಿಸಿ ಪಾರದರ್ಶಕವಾಗಿ, ನಿಷ್ಪಕ್ಷಪಾತವಾಗಿ ಚುನಾವಣೆ ನಡೆಸಲು ಆದೇಶಿಸಿದೆ.

ಮೇಲೆ ತಿಳಿಸಿದಂತೆ ನೇಮಿಸಲ್ಪಟ್ಟ ಚುನಾವಣಾಧಿಕಾರಿಗಳು, ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು, 2004 (2015ರ ತಿದ್ದುಪಡಿ)ರ ನಿಯಮ 5-ಎ ರಂತೆ **ದಿನಾಂಕ: 01.01.2026 ರಿಂದ 31.12.2026** ರವರೆಗೆ ನಡೆಯಬೇಕಾಗಿರುವ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಧದ ಸೌಹಾರ್ದ ಸಹಕಾರಿಗಳ ಚುನಾವಣೆಯನ್ನು ಹಾಲಿ ಇರುವ ಆಡಳಿತ ಮಂಡಲಿ ಅವಧಿ ಮುಕ್ತಾಯವಾಗುವ 15 ದಿನಗಳ ಮುಂಚಿತವಾಗಿ ಚುನಾವಣೆ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು.

(ಡಾ: ಎನ್.ನಾಗಾಂಬಿಕಾ ದೇವಿ)
ಆಯುಕ್ತರು,
ಸಹಕಾರ ಚುನಾವಣಾ ಪ್ರಾಧಿಕಾರ,
ಬೆಂಗಳೂರು.

**ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ :-**

1. ನಿರ್ದೇಶಕರು, ಸರ್ಕಾರಿ ಕೇಂದ್ರ ಮುದ್ರಣಾಲಯ, ಕೆಂಗೇರಿ, ಬೆಂಗಳೂರು ಇವರಿಗೆ ಮುಂದಿನ ಕರ್ನಾಟಕರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಿದೆ.
2. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್‌ರಸ್ತೆ, ಬೆಂಗಳೂರು
3. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು.

4. ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), (ಕಾನೂನು ಕೋಶ),(ಐ.ಸಿ.ಡಿ.ಪಿ) ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್‌ರಸ್ತೆ, ಬೆಂಗಳೂರು.
5. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು,/ ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು,
6. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪ ನಿಬಂಧಕರುಗಳಿಗೆ.
7. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ.

**<u>ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ :-</u>**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಆಲಿ ಆಸ್ಕರ್‌ರಸ್ತೆ, ಬೆಂಗಳೂರು-52.
3. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
4. ರಾಜ್ಯ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
5. ರಾಜ್ಯ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ರೇಸ್‌ಕೋರ್ಸ್‌ರಸ್ತೆ, ಬೆಂಗಳೂರು ಇವರಿಗೆ ಮುಂದಿನ ಸಹಕಾರ ವಾರ ಪತ್ರಿಕೆಯಲ್ಲಿ ಪ್ರಕಟಿಸುವ ಸಲುವಾಗಿ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
8. ಪ್ರಾಧಿಕಾರದ ಅಧಿಕಾರಿ / ಸಿಬ್ಬಂದಿ / ರಕ್ಷಣಾ ಕಡತಕ್ಕೆ.